**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2019-20ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳು ಖರೀದಿಸಲು ನೋಂದಣಿ ಮತ್ತು ಖರೀದಿ ಕಾಲಾವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಸಇ 42 ಎಂಆರ್ಇ 2020/ಇ.ಅ. ದಿನಾಂಕ: 13.02.2020, 12.03.2020, 08.04.2020 ಮತ್ತು 27.04.2020

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಇವರ ಪತ್ರ ಸಂಖ್ಯೆ: ಮಾರಾಟ/029/2019-20, ದಿನಾಂಕ:28.04.2020.

* * * * *

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಆದೇಶಗಳಲ್ಲಿ, 2019-20ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಪ್ರತಿ ಕ್ವಿಂಟಾಲ್‌ಗೆ ರೂ.4,875/-ರಂತೆ ಗರಿಷ್ಟ 1,43,390 ಮೆಟ್ರಿಕ್ ಟನ್ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಧಾರವಾಡ, ಗದಗ, ಬೆಳಗಾವಿ, ವಿಜಯಪುರ, ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಚಿತ್ರದುರ್ಗ, ಬಾಗಲಕೋಟೆ, ಕೊಪ್ಪಳ, ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳ ರೈತರಿಂದ ಖರೀದಿಸಲು ಅನುಮತಿಯನ್ನು ನೀಡಿ, ರೈತರ ನೋಂದಣಿ ಅವಧಿಯನ್ನು ದಿನಾಂಕ:12.05.2020 ರವರೆಗೆ ಹಾಗೂ ಖರೀದಿ ಕಾಲಾವಧಿಯನ್ನು ದಿನಾಂಕ:25.05.2020 ರವರೆಗೆ ನಿಗದಿಪಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ, ಬೆಂಗಳೂರು ಇವರ ಪತ್ರದಲ್ಲಿ 2019-20ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕಡಲೆ ಕಾಳು ಖರೀದಿಗೆ ಇರುವ ಪ್ರಮಾಣದ ಮಿತಿಯನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 03 ಕ್ವಿಂಟಾಲ್‌ನಂತೆ, ಗರಿಷ್ಠ 10 ಕ್ವಿಂಟಾಲ್ ಖರೀದಿಸಲು ಅನುಮತಿ ನೀಡಲಾಗಿದೆ. ಕೇಂದ್ರ ಸರ್ಕಾರವು 1,43,390 ಮೆಟ್ರಿಕ್ ಟನ್ ಕಡಲೆ ಕಾಳು ಖರೀದಿಸಲು ಅನುಮೋದನೆ ನೀಡಿದೆ. ಪ್ರಸ್ತುತ ಕೋವಿಡ್ - 19ರ ಕಾರಣದಿಂದಾಗಿ ಕೇಂದ್ರ ಸರ್ಕಾರದ ಗುರಿಯನ್ನು ಪೂರೈಸಲು ಕಷ್ಟಸಾಧ್ಯವಾಗಿದ್ದು, ಈಗ ನೋಂದಣಿಯಾಗಿರುವ ಪ್ರತಿ ರೈತರಿಂದ ಹೆಚ್ಚುವರಿಯಾಗಿ 05 ಕ್ವಿಂಟಾಲ್ ಖರೀದಿಸಲು ಅವಕಾಶವಿದ್ದು, ಕಡಲೆ ಕಾಳು ಖರೀದಿ ಪ್ರಮಾಣವನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 03 ಕ್ವಿಂಟಾಲ್‌ನಂತೆ, ಗರಿಷ್ಠ 10 ಕ್ವಿಂಟಾಲ್ ಖರೀದಿಸಲು ಅನುಮತಿ ನೀಡಲಾಗಿರುವುದನ್ನು ಮಾರ್ಪಡಿಸಿ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಕಡಲೆ ಕಾಳನ್ನು ಖರೀದಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

--2

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಇ 42 ಎಂಆರ್‌ಇ 2020/ಇ.ಆ**
**ಬೆಂಗಳೂರು, ದಿನಾಂಕ:30.04.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲಬೆಲೆ ಯೋಜನೆಯಡಿಯಲ್ಲಿ ಕಡಲೆಕಾಳು ಖರೀದಿಸಲು ಅನುಮತಿ ನೀಡಿರುವ ಆದೇಶ ದಿನಾಂಕ:13.02.2020ರ ಕ್ರಮ ಸಂಖ್ಯೆ 3ರಲ್ಲಿನ ಪ್ರತಿ ರೈತರಿಂದ ಪ್ರತಿ ಎಕರೆಗೆ 03 ಕ್ವಿಂಟಾಲ್‌ನಂತೆ, ಗರಿಷ್ಠ 10 ಕ್ವಿಂಟಾಲ್ ಕಡಲೆ ಖರೀದಿ ಪ್ರಮಾಣ ನಿಗದಿಪಡಿಸಿರುವುದನ್ನು ಮಾರ್ಪಡಿಸಿ ನೋಂದಾಯಿತ ರೈತರಿಂದ ಈಗಾಗಲೇ ಖರೀದಿಸಿರುವ ಕಡಲೆಯ ಪ್ರಮಾಣ ಸೇರಿ ಒಟ್ಟು ಪ್ರತಿ ಎಕರೆಗೆ 05 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 15 (ಹದಿನೈದು) ಕ್ವಿಂಟಾಲ್‌ಗೆ ನಿಗದಿಪಡಿಸಿ ಆದೇಶಿಸಲಾಗಿದೆ.

ಉಳಿದಂತೆ, ಕಡಲೆ ಖರೀದಿಗೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶ/ ಷರತ್ತುಗಳು ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎಸ್. ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಹಕಾರ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು(ಲೆಕ್ಕಪತ್ರ ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ವಿಕಾಸಸೌಧ,
7. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ನಂ:16, 2ನೇ ರಾಜಭವನ ರಸ್ತೆ, ಬೆಂಗಳೂರು.
10. ಜಿಲ್ಲಾಧಿಕಾರಿಗಳು, ಧಾರವಾಡ, ಗದಗ, ಬೆಳಗಾವಿ, ವಿಜಯಪುರ, ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಚಿತ್ರದುರ್ಗ, ಬಾಗಲಕೋಟೆ, ಕೊಪ್ಪಳ, ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳು.
11. ನಿರ್ದೇಶಕರು, ಎನ್.ಐ.ಸಿ., ವಿಶ್ವೇಶ್ವರಯ್ಯ ಗೋಪುರ (ಚಿಕ್ಕ ಗೋಪುರ), ಅಂಬೇಡ್ಕರ್ ವೀದಿ, ಬೆಂಗಳೂರು
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಂಗಳೂರು.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ನಂ.8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.
14. ಶಾಖಾ ವ್ಯವಸ್ಥಾಪಕರು, ನಾಫೆಡ್, ಶಾಖಾ ಕಛೇರಿ, ವಸಂತನಗರ, ಬೆಂಗಳೂರು.
15. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಮತ್ತು ಅಧ್ಯಕ್ಷರು, ಕೃಷಿ ಉತ್ಪನ್ನ ಮತ್ತು ತೋಟಗಾರಿಕೆ ಬೆಳೆಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
16. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
17. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ.
18. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಹಕಾರ ಇಲಾಖೆ.
19. ವೆಬ್‌ಪೋರ್ಟಲ್/ಶಾಖಾ ರಕ್ಷಾ ಪ್ರತಿ/ಹೆಚ್ಚುವರಿ ಪ್ರತಿ.